ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಮಂಡ್ಯ ಜಿಲ್ಲೆಯ ರೈತರಿಗೆ ಪಶುಸಂಗೋಪನೆ ಇಲಾಖೆಯಿಂದ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

596 (808) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪಶು ಸಂಗೋಪನಾ ಇಲಾಖೆ ವತಿಯಿಂದ ರೈತರಿಗೆ ದೊರೆಯುತ್ತಿರುವ ಸೌಲಭ್ಯಗಳಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಪಶು ಸಂಗೋಪನಾ ಇಲಾಖಾವತಿಯಿಂದ ಮಂಡ್ಯ ಜಿಲ್ಲಾ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಆರ್ಥಿಕವಾಗಿ ಮತ್ತು ಭೌತಿಕವಾಗಿ ವಿವಿಧ ಯೋಜನೆಗಳಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ; (ತಾಲ್ಲೂಕುವಾರು ಫಲಾನುಭವಿಗಳ ವಿವರವಾದ ಮಾಹಿತಿ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈವರೆಗೆ ಯಾವ ಯಾವ ಯೋಜನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ; ಈ ಸಂಬಂಧ ಜಿಲ್ಲಾ ಮತ್ತು ತಾಲ್ಲೂಕುವಾರು ಅನುದಾನದ ಅಂದಾಜು ಮೊತ್ತ ಮತ್ತು ಗುರಿಯೇನು? (ವಿವರ ನೀಡುವುದು)